# All India Radio: Bangalore
# Regional Bulletin In Kannada
# 09.03.2025 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

*****************

ಮುಖ್ಯಾಂಶಗಳು

೧. ಸರಕು ಮತ್ತು ಸೇವಾ ತೆರಿಗೆ-ಜಿಎಸ್‌ಟಿ ದರ ಶೀಘ್ರದಲ್ಲೇ ಇನ್ನಷ್ಟು ಇಳಿಕೆ - ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್

೨. ನಿನ್ನೆ ನಡೆದ ಲೋಕ ಅದಾಲತ್‌ನಲ್ಲಿ ಐದು ಜಿಲ್ಲೆಗಳಲ್ಲಿ ೩೧ ಸಾವಿರಕ್ಕೂ ಅಧಿಕ ಪ್ರಕರಣ ಇತ್ಯರ್ಥ; ಕೋಲಾರದಲ್ಲಿ ೪೦ ಸಾವಿರ ವ್ಯಾಜ್ಯ ಪೂರ್ವ ಪ್ರಕರಣ ರಾಜಿ ಮೂಲಕ ವಿಲೇವಾರಿ

೩. ಧಾರವಾಡದಲ್ಲಿ ಉದ್ಯೋಗ ಮೇಳ ಆರಂಭ; ೬೦ ಕೈಗಾರಿಕೆ, ಸಂಸ್ಥೆಗಳು ಭಾಗಿ

೪. ಅಪರಾಧ ತಡೆಗಾಗಿ ಬೀದರ್‌ನಲ್ಲಿ ನೂತನ ನಿಯಂತ್ರಣಾ ವ್ಯವಸ್ಥೆ ಉದ್ಘಾಟನೆ

*****************

ಸರಕು ಮತ್ತು ಸೇವಾ ತೆರಿಗೆ-ಜಿಎಸ್‌ಟಿ ದರಗಳು ಇನ್ನೂ ಇಳಿಕೆಯಾಗಲಿವೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

ಅವರು ಮುಂಬೈನಲ್ಲಿ ನಿನ್ನೆ ಸಮಾರಂಭವೊಂದರಲ್ಲಿ ಮಾತನಾಡಿ, ಜಿಎಸ್‌ಟಿ ತೆರಿಗೆ ದರ ತರ್ಕಬದ್ಧಗೊಳಿಸುವ ಕಾರ್ಯ ನಡೆದಿದ್ದು, ಸ್ತರಗಳನ್ನು ನಿರ್ಧರಿಸುವ ಕೆಲಸ ಬಹುತೇಕ ಪೂರ್ಣಗೊಂಡಿದೆ ಎಂದು ತಿಳಿಸಿದರು.

*****************

ನಿನ್ನೆ ನಡೆದ ಲೋಕ ಅದಾಲತ್‌ನಲ್ಲಿ ಐದು ಜಿಲ್ಲೆಗಳಲ್ಲಿ ೩೧ ಸಾವಿರಕ್ಕೂ ಅಧಿಕ ಪ್ರಕರಣ ಇತ್ಯರ್ಥಗೊಳಿಸಲಾಗಿದೆ.

ಚಿತ್ರದುರ್ಗದಲ್ಲಿ ವೈವಾಹಿಕ ಜೀವನ ಅಂತ್ಯಕ್ಕೆ ಅರ್ಜಿ ಹಾಕಿದ್ದ ಎಂಟು ಜೊಡಿ ಒಂದಾಗಿವೆ. ನಿನ್ನೆ ನಡೆದ ಲೋಕಅದಾಲತ್ನಲ್ಲಿ ಈ ಜೋಡಿಗಳನ್ನು ಒಂದು ಮಾಡಲಾಗಿದೆ ಎಂದು ಚಿತ್ರದುರ್ಗ ಜಿಲ್ಲಾ ಸತ್ರ ನ್ಯಾಯಾಧೀಶ ವಾಸುದೇವ ರೋಣ ತಿಳಿಸಿದರು. ಜಿಲ್ಲಾ ನ್ಯಾಯಾಲಯದಲ್ಲಿ ಮೂರು

ಜಿಲ್ಲೆಯ ಇತರರೆ ತಾಲೂಕುಗಳಲ್ಲಿನ ನ್ಯಾಯಾಲಯದಲ್ಲಿ ಐದು ಪ್ರಕರಣಗಳನ್ನು ಅಂತ್ಯಗೊಳಿಸಲಾಗಿದೆ.

ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳನ್ನು ಒಳಗೊಂಡ ಒಟ್ಟು ೩೧ ನ್ಯಾಯಾಲಯಗಳಲ್ಲಿ ಜರುಗಿದ ಲೋಕ ಅದಾಲತ್ ನಲ್ಲಿ ಒಟ್ಟು ೧೧ ಸಾವಿರದ ೬೩೪ ಪ್ರಕರಣಗಳು ಇತ್ಯರ್ಥಗೊಂಡಿವೆ. ಒಟ್ಟು ೫೧ ಕೋಟಿ ೩ ಲಕ್ಷದ ೯೭ ಸಾವಿರದ ೩೦೫ ರೂಪಾಯಿ ಪರಿಹಾರ ನೀಡುವಂತೆ ಜನತಾ ಅದಾಲತ್ ಆದೇಶಿಸಿದೆ. ಸಾರ್ವಜನಿಕರು, ಕಕ್ಷಿದಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳುವುದು, ಉತ್ತಮ ಜೀವನ ನಡೆಸಲು ಒಂದು ಸದವಕಾಶವಾಗಿದೆ ಎಂದು ನ್ಯಾಯಾಧೀಶರಾದ ಕೆ.ಜಿ ಶಾಂತಿ ಅವರು ಹೇಳಿದರು.

ದಾವಣಗೆರೆ ಜಿಲ್ಲೆಯ ೨೨ ನ್ಯಾಯಾಲಯಗಳಲ್ಲಿ ನಡೆದ ರಾಷ್ಟ್ರೀಯ ಲೋಕ ಅದಾಲತ್ ನಲ್ಲಿ ೧೦ ಸಾವಿರದ ೧೮೬ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ ಎಂದು ಜಿಲ್ಲಾ ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ತಿಳಿಸಿದ್ದಾರೆ. ಮುಕ್ತಾಯಗೊಂಡ ಪ್ರಕರಣಗಳಲ್ಲಿ ಒಬ್ಬ ೧೨ ಕೋಟಿ ೮೪ ಲಕ್ಷಕ್ಕೂ ಅಧಿಕ ಪರಿಹಾರ ಕೊಡಿಸಲಾಗಿದೆ. ಇದೇ ವೇಳೆ ವಿವಾಹ ವಿಚ್ಚೇದನ ಕೋರಿದ್ದ ೩೯ ದಂಪತಿ ವೈ ಮನಸು ಮರೆತು ಮತ್ತೆ ಒಂದಾಗಿ ಸಹಬಾಳ್ವೆ ನಡೆಸಲು ಮರಳಿದ್ದಾರೆ ಎಂದು ರಾಜೇಶ್ವರಿ ಹೆಗಡೆ ತಿಳಿಸಿದ್ದಾರೆ.

ರಾಷ್ಟ್ರೀಯ ಲೋಕ್ ಅದಾಲತ್ ನಲ್ಲಿ ಕೋಲಾರ ಜಿಲ್ಲೆಯ ನ್ಯಾಯಾಲಯಗಳಲ್ಲಿ ಚಾಲ್ತಿಯಲ್ಲಿದ್ದ ೧೦ ಸಾವಿರ ಪ್ರಕರಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥಗೊಂಡಿವೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ನ್ಯಾಯಾಧೀಶ ಸುನೀಲ್ ಹೊಸಮನಿ ತಿಳಿಸಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ನ್ಯಾಯಾಲಯಗಳಲ್ಲಿದ್ದ ಸುಮಾರು ೪೦ ಸಾವಿರ ವ್ಯಾಜ್ಯ ಪೂರ್ವ ಪ್ರಕರಣಗಳು ಸೇರಿದಂತೆ ರಾಜೀ ಮೂಲಕ ಮುಕ್ತಾಯಗೊಂಡಿವೆ ಎಂದು ತಿಳಿಸಿದ್ದಾರೆ.

ಧ್ವನಿ -ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸುನೀಲ್ ಹೊಸಮನಿ

ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಶೀಘ್ರ ನ್ಯಾಯ ಪಡೆಯುವ ಮೂಲಕ ಕಡಿಮೆ ಖರ್ಚಿನಲ್ಲಿ ನ್ಯಾಯ ಪಡೆದುಕೊಳ್ಳಲು ಸಹಕಾರಿಯಾಗಿದೆ ಎಂದು ಅವರು ಹೇಳಿದರು.

ಅದೇ ರೀತಿ ಕೆಜಿಎಫ್ ತಾಲೂಕಿನ ನ್ಯಾಯಾಲಯದಲ್ಲಿ ಲೋಕ್ ಅದಾಲತ್ ನಲ್ಲಿ ವಿಚ್ಛೇದನ ಪಡೆಯಲು ಅರ್ಜಿ ಸಲ್ಲಿಸಿದ್ದ ಎರಡು ದಂಪತಿಗಳು ಪುನಃ ವಿಚ್ಛೇದನ ಅರ್ಜಿಯನ್ನು ವಾಪಸ್ ಪಡೆದು ಒಂದಾಗಿದ್ದಾರೆ ಎಂದು ತಿಳಿಸಿದರು.

*****************

ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಿನ್ನೆ ರಾತ್ರಿ ಗಾಯನಾಚಾರ್ಯ ಗುರುರಾವ್ ದೇಶಪಾಂಡೆ ಸಂಗೀತ ಸಭಾ ವತಿಯಿಂದ ಗುರುರಾವ್ ದೇಶಪಾಂಡೆ - ಭೀಮಸೇನ್ ಜೋಶಿ ಸ್ಮರಣಾರ್ಥ ಅಹೋರಾತ್ರಿ ಸಂಗೀತೋತ್ಸವ ಆಯೋಜಿಸಲಾಗಿತ್ತು

ಈ ಬಾರಿಯ ಸಂಗೀತೋತ್ಸವದ ವೇಳೆ ನಾಡಿನ ಖ್ಯಾತ ಹಿಂದೂಸ್ತಾನಿ ಗಾಯಕರಾದ ಪದ್ಮಶ್ರೀ ಪುರಸ್ಕೃತ ಪಂಡಿತ್ ವೆಂಕಟೇಶ್ ಕುಮಾರ್ ಅವರಿಗೆ ಗುರುಗಂಧರ್ವ ರಾಷ್ಟ್ರೀಯ ಪುರಸ್ಕಾರ ಪ್ರದಾನ ಮಾಡಿ ಗೌರವಿಸಲಾಯಿತು. ಇದೇ ವೇಳೆ ಇತ್ತೀಚೆಗೆ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಒಂದಾದ ಪದ್ಮ ವಿಭೂಷಣಕ್ಕೆ ಭಾಜನರಾದ ಡಾ. ಎಲ್.ಸುಬ್ರಮಣ್ಯಂ ಅವರನ್ನೂ ಸನ್ಮಾನಿಸಲಾಯಿತು.

*****************

ಧಾರವಾಡ ನಗರ ಕರ್ನಾಟಕ ಕಾಲೇಜು ಆವರಣದ, ಸೃಜನಾ ರಂಗಮಂದಿರದಲ್ಲಿ ಇಂದು ಉದ್ಯೋಗ ಮೇಳ ನಡೆದಿದೆ. ೬೫ ಕೈಗಾರಿಕೆಗಳು, ೨೫ ಸಂಸ್ಥೆಗಳು ಈ ಮೇಳದಲ್ಲಿ ಭಾಗವಹಿಸಿವೆ.

ನವಲಗುಂದ ಶಾಸಕ ಎನ್.ಎಚ್ ಕೋನರೆಡ್ಡಿ ಉದ್ಯೋಗ ಮೇಳವನ್ನು ಉದ್ಘಾಟಿಸಿದರು.

ಕೌಶಲ ಅಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆ, ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ ಹಾಗೂ ಧಾರವಾಡ ಜಿಲ್ಲಾಡಳಿತದ ಸಹಯೋಗದಲ್ಲಿ ಆಯೋಜಿತವಾಗಿರುವ ಉದ್ಯೋಗ ಮೇಳವು ಇಂದು ಸಂಜೆ ೬ ಗಂಟೆಯವರೆಗೆ ನಡೆಯಲಿದೆ.

*****************

ಬೀದರ್ ನಗರದಲ್ಲಿ ಅಪರಾಧ ತಡೆಗಾಗಿ ಪ್ರಮುಖ ವೃತ್ತಗಳಲ್ಲಿ ನಿಯೋಜಿಸಲಾದ ಕ್ಯಾಮರಾ ಹಾಗೂ ನಿಯಂತ್ರಣ ವ್ಯವಸ್ಥೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಇಂದು ಉದ್ಘಾಟಿಸಿದರು.

ನಂತರ ಈ ಕುರಿತು ಆಕಾಶವಾಣಿಯೊಂದಿಗೆ ಸಚಿವ ಈಶ್ವರ ಖಂಡ್ರೆ ಮಾತನಾಡಿದರು.

ಧ್ವನಿ: ಈಶ್ವರ್ ಖಂಡ್ರೆ

ನಿಯಂತ್ರಣ ಕೇಂದ್ರದ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಈ ವ್ಯವಸ್ಥೆ ಮೂಲಕ ಯಾವ ವಾಹನ ಜಿಲ್ಲೆಯಲ್ಲಿ ಪ್ರವೇಶ ಮಾಡಿದೆ, ಎಲ್ಲಿಂದ ಅದು ಹೊರಹೋಗಿದೆ ಎನ್ನುವುದನ್ನು ವೀಕ್ಷಿಸಬಹುದು. ಹಾಗೇಯೆ ಅಪರಾಧಿಗಳ ಚಲನವಲನಗಳನ್ನು ಕೂಡ ಈ ಕ್ಯಾಮೆರಾಗಳ ಸಹಾಯದಿಂದ ವೀಕ್ಷಣೆ ಹಾಗೂ ಸರ್ವರ್‌ನಲ್ಲಿ ಸ್ಟೋರ್ ಮಾಡಲಾಗುವುದು. ಇದೊಂದು ಅತ್ಯುತ್ತಮ ಯೋಜನೆ, ರಾಜ್ಯದಲ್ಲಿ ಇದು ಪ್ರಪ್ರಥಮವಾಗಿದೆ” ಎಂದು ಹೇಳಿದರು.

****************

ವಿಶ್ವ, ಶ್ರಾವ್ಯ, ದೃಶ್ಯ ಮತ್ತು ಮನೋರಂಜನಾ ಶೃಂಗಸಭೆ ವೇವ್ಸ್ ಅಂಗವಾಗಿ ಏರ್ಪಡಿಸಲಾಗಿರುವ ಅನಿಮೇಶನ್ ಫೀಲ್ಮ್ ಮೇಕರ್ಸ್ ಸ್ಪರ್ಧೆಗೆ ಒಟ್ಟು ಒಂದು ಸಾವಿರ ೨೯೦ ಅಭ್ಯರ್ಥಿಗಳು ಪ್ರವೇಶ ಅರ್ಜಿ ಸಲ್ಲಿಸಿದ್ದಾರೆ. ಇದರಲ್ಲಿ ೧೯ ಅಂತಾರಾಷ್ಟೀಯ ಅಭ್ಯರ್ಥಿಗಳು ಸೇರಿದ್ದಾರೆ.

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ನೇತೃತ್ವದಲ್ಲಿ ವೇವ್ಸ್ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ವೇವ್ಸ್ ಶೃಂಗಸಭೆ ಮೇ ೧ ರಿಂದ ೪ ರವರೆಗೆ ಮುಂಬೈನಲ್ಲಿ ನಡೆಯಲಿದೆ.

****************

೧೬ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಸಮಾರೋಪ ಸಮಾರಂಭ ಬೆಂಗಳೂರಿನಲ್ಲಿ ನಿನ್ನೆ ನಡೆಯಿತು.

ಜೀವಮಾನ ಸಾಧನೆಗೆ ಭಾರತೀಯ ಚಿತ್ರರಂಗದ ಮೇರು ನಟಿ, ಬಹುಭಾಷಾ ಕಲಾವಿದೆ ಶಬನಾ ಅಜ್ಮೀ ಅವರನ್ನು ಆಯ್ಕೆ ಮಾಡಿದ್ದು, ಅವರ ಪರವಾಗಿ ಹಿರಿಯ ನಟಿ ಅರುಂಧತಿ ನಾಗ್ ಪ್ರಶಸ್ತಿ ಸ್ವೀಕರಿಸಿದರು. ಇದೇ ವೇಳೆ ವಿವಿಧ ಸ್ಪರ್ಧಾ ವಿಭಾಗದಲ್ಲಿ ಆಯ್ಕೆಯಾದ ಚಿತ್ರಗಳಿಗೆ ಪ್ರಶಸ್ತಿ ನೀಡಿ, ಗೌರವಿಸಲಾಯಿತು.

****************

ಪ್ರಾಣಿಗಳ ಜೀವನಶೈಲಿ ಅಭಿವೃದ್ಧಿಯು ರೈತರಿಗೆ ಆರ್ಥಿಕವಾಗಿ ಹಾಗೂ ಉದ್ಯಮಶೀಲತೆಗೆ ದಾರಿಯಾಗಲಿದೆ ಎಂದು ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ. ವೆಂಕಟೇಶ್ ಹೇಳಿದರು.

ಬೆಂಗಳೂರಿನಲ್ಲಿ ನಿನ್ನೆ ರಾಷ್ಟ್ರೀಯ ವೈಜ್ಞಾನಿಕ ಸಮಾವೇಶ ಮತ್ತು ೨೨ನೇ ರಾಷ್ಟ್ರೀಯ ಪಶುವೈದ್ಯಕೀಯ ವಿಜ್ಞಾನ ವಿದ್ವನ್ಮಂಡಲಿ ಸಮಾವೇಶವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅತ್ಯುತ್ತಮ ಜಾನುವಾರು, ಕೋಳಿ ಸಾಕಣೆ, ಆರೋಗ್ಯ ರಕ್ಷಣೆ ಮತ್ತು ಉತ್ಪಾದನೆ ಹಾಗೂ ಸಾಕುಪ್ರಾಣಿಗಳ ಪೋಷಣೆಗೆ ಸವಾಲುಗಳು ಮತ್ತು ಆದ್ಯತೆ"* ಎಂಬ ವಿಷಯದಡಿ ಈ ಸಮಾವೇಶ ಆಯೋಜಿಸಲಾಗಿದೆ.

****************

ಚಿಕ್ಕಮಗಳೂರು ನಗರದಲ್ಲಿ ಇಂದು ದೈಹಿಕ ಹಾಗು ಮಾನಸಿಕ ಆರೋಗ್ಯಕ್ಕಾಗಿ ಫಿಟ್ನೆಸ್ ಓಟ ಕಾರ್ಯಕ್ರಮ ನಡೆಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಆಮಾಟೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದರು. ಪೊಲೀಸ್ ಸಿಬ್ಬಂದಿಗಳು, ಬ್ಯಾಂಕ್ ನೌಕರರು, ಸರ್ಕಾರಿ ನೌಕರರು, ವಿವಿಧ ಸಂಘ ಸಂಸ್ಥೆಗಳ ಸದಸ್ಯರು ಸೇರಿ ೧೫೦೦ ಕ್ಕು ಹೆಚ್ಚು ಜನ ಈ ಓಟದಲ್ಲಿ ಭಾಗವಹಿಸಿದ್ದರು.

*********ಮುಕ್ತಾಯ********